**ಕರ್ನಾಟಕ ಸರ್ಕಾರ**
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಬಿಟಿಇ/03/ಇಎಪಿ/2025

ಆಯುಕ್ತರವರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆರಸ್ತೆ, ಬೆಂಗಳೂರು-560001,
ದಿನಾಂಕ: 06.06.2025.

**ಸುತ್ತೋಲೆ**

**ವಿಷಯ**: ಪರೀಕ್ಷಾ ಫಲಿತಾಂಶ ಹಿಂದಕ್ಕೊಪ್ಪಿಸುವ ಅರ್ಜಿಗಳ ಬಗ್ಗೆ

**ಉಲ್ಲೇಖ**:
1. ಸರ್ಕಾರಿ ಆದೇಶ ಸಂ:ಇಡಿ/258/ಟಿಪಿಇ 12, ಬೆಂಗಳೂರು, ದಿ: 06-11-1997.
2. ಸರ್ಕಾರಿ ಆದೇಶ ಸಂ:ಇಡಿ/258/ಟಿಪಿಇ/98, ಬೆಂಗಳೂರು ದಿ:11-8-2000.
3. ಸರ್ಕಾರಿ ಆದೇಶ ಸಂ:ಎಫ್ ಡಿ/11/ಟಿಪಿಇ/2007 ಬೆಂಗಳೂರು, ದಿ:3-12-2007

*-*-*-*-*-*-*

ತಾಂತ್ರಿಕ ಪರೀಕ್ಷಾ ಮಂಡಳಿಯ ಡಿಪ್ಲೋಮ ಕೋರ್ಸುಗಳ ಏಪ್ರಿಲ್/ಮೇ - 2025 ರ ಸೆಮಿಸ್ಟರ್ ಪರೀಕ್ಷೆಗಳ ಫಲಿತಾಂಶವನ್ನು ಹಿಂದಕ್ಕೊಪ್ಪಿಸಲು ಇಚ್ಛಿಸುವ ಅಭ್ಯರ್ಥಿಗಳ ಬಗ್ಗೆ ಪ್ರಿನ್ಸಿಪಾಲರುಗಳು ಅಭ್ಯರ್ಥಿಗಳ ಅಂಕಪಟ್ಟಿಗಳು ಬರುವವರೆಗೆ ಕಾಯದೆ ಫಲಿತಾಂಶದ ಜೊತೆಗೆ ಆನ್ ಲೈನ್ ನಲ್ಲಿ (BTE Linx) ಕಳುಹಿಸಿರುವ ಮಾರ್ಕ್ಸ್ ರಿಜಿಸ್ಟರ್‌ನಲ್ಲಿ ಸೂಚಿಸಿರುವ ಅಂಕಗಳ ಆಧಾರದ ಮೇಲೆ ಫಲಿತಾಂಶ ಪ್ರಕಟವಾದ 01 ತಿಂಗಳೊಳಗಾಗಿ (ದಿನಾಂಕ: 05.07.2025 ರೊಳಗೆ) ಫಲಿತಾಂಶ ಹಿಂದಕ್ಕೊಪ್ಪಿಸುವ ಅರ್ಜಿಗಳನ್ನು ಅಪೇಕ್ಷಿತ ಅಭ್ಯರ್ಥಿಗಳಿಂದ ಪಡೆದು ಕ್ರೋಢೀಕರಿಸಿ ತಾಂತ್ರಿಕ ಪರೀಕ್ಷಾ ಮಂಡಳಿಯ ಕಾರ್ಯದರ್ಶಿಯವರಿಗೆ ದಿನಾಂಕ: 11.07.2025 ರೊಳಗೆ ಕಳುಹಿಸಿಕೊಡಲು ಸೂಚಿಸಲಾಗಿದೆ. ಇದಲ್ಲದೆ ಉಲ್ಲೇಖ (3) ರ ಸರ್ಕಾರದ ಆದೇಶದ ಪ್ರಕಾರ ಫಲಿತಾಂಶ ಹಿಂದಕ್ಕೊಪ್ಪಿಸುವ ಶುಲ್ಕ ರೂ.500/-ಗಳನ್ನು ಅಭ್ಯರ್ಥಿ ಅರ್ಜಿ ಸಲ್ಲಿಸಿದ ದಿನಾಂಕದಿಂದ 03 ದಿನಗಳೊಳಗಾಗಿ ಲೆಕ್ಕಶೀರ್ಷಿಕೆ (0202-02-101-0-01) ಗೆ ಜಮಾ ಮಾಡಲು ತಿಳಿಸಲಾಗಿದೆ. ಇದಕ್ಕೆ ತಪ್ಪಿದಲ್ಲಿ ಸಂಸ್ಥೆಯವರು ಉಲ್ಲೇಖಿಸಿದ ಸರ್ಕಾರಿ ಆದೇಶದ ಪ್ರಕಾರ ಪ್ರತಿದಿನ ತಡವಾಗಿ ಜಮಾ ಮಾಡಿದುದಕ್ಕೆ ದಂಡ ಶುಲ್ಕವೆಂದು ದಿನ ಒಂದಕ್ಕೆ ರೂ.1000/-ಗಳಂತೆ ಪಾವತಿ ಮಾಡಬೇಕಾಗಿರುತ್ತದೆ ಎಂದು ತಿಳಿಸಲಾಗಿದೆ.

ಕಾರ್ಯದರ್ಶಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಬೆಂಗಳೂರು.

**ಇವರಿಗೆ,**
ಎಲ್ಲಾ ಸರ್ಕಾರಿ / ಅನುದಾನಿತ / ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ - ಮುಂದಿನ ಸೂಕ್ತ ಕ್ರಮಕ್ಕಾಗಿ.

**ಪ್ರತಿ:**
1. ಆಯುಕ್ತರ ಆಪ್ತ ಶಾಖೆ - ಅವಗಾಹನೆಗಾಗಿ.
2. ನಿರ್ದೇಶಕರ ಆಪ್ತ ಶಾಖೆ- ಅವಗಾಹನೆಗಾಗಿ.
3. ಸಹಾಯಕ ನಿರ್ದೇಶರು (ಎಸಿಎಂ)
4. ಇ-ಗವರ್ನೆನ್ಸ್ ವಿಭಾಗಕ್ಕೆ (ವೆಬ್ ಸೈಟ್‌ನಲ್ಲಿ ಪ್ರಕಟಿಸಲು)
5. ಇಸಿಎಸ್/ಇಎಫ್‌ಎಸ್/ಇಆರ್‌ಎಸ್, ಮುಂದಿನ ಕ್ರಮಕ್ಕಾಗಿ.
6. ಸಾರ್ವಜನಿಕ ಸಂಪರ್ಕಾಧಿಕಾರಿ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
7. ರಿಜಿಸ್ಟ್ರಾರ್ (ಪರೀಕ್ಷೆ)
8. ಕಾರ್ಯದರ್ಶಿಯವರ ಆಪ್ತ ಶಾಖೆ.
9. ಉಪ ನಿರ್ದೇಶಕರು (ಪರೀಕ್ಷೆ)
10. ಅಧೀಕ್ಷಕರು ಆರ್ ಡಿ ಎಂ (01)ರಿಂದ (15)
11. ಗಣಕ ಕೇಂದ್ರ ಬಿಟಿಇ ಲಿಂಕ್ಸ್ ವೆಬ್ ಪೋರ್ಟಲ್ ನಲ್ಲಿ ಪ್ರಕಟಿಸಲು.
12. ಕಚೇರಿ ಪ್ರತಿ.